**ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ**

**ಸಿ ಸಿ ನಂ. 147/2020**

**ಚಾ.ಸಾ.** 9

**ಪ್ರಾ.ಸಾ.** 4

**ದಿನಾಂಕಃ 12.03.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ವಿಜಯ ಬಿರಾದರ |
| ತಂದೆಃ ಗಂಡನ ಹೆಸರು | ಬಸನಗೌಡ |
| ಉದ್ಯೋಗ | ಡಿ ಎಸ್ ಪಿ ಕರ್ನಾಟಕ ಲೋಕಾಯುಕ್ತ |
| ವಯಸ್ಸು | 49 ವರ್ಷ |
| ವಾಸಸ್ಥಳ | ಗದಗ |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದ**

ದಿಃ 26.07.2017 ರಿಂದ ದಿಃ 18.01.2021 ರವರೆಗೆ ಕಲಘಟಗಿ ಪೊಲೀಸ ಠಾಣೆ ಆರಕ್ಷಕ ನಿರೀಕ್ಷಕ ಎಂದು ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ 01.12.2019 ರಂದು ಚಾಸಾ-8 ರವರಿಂದ ಈ ಪ್ರಕರಣದ ಕಡತವನ್ನು ಸ್ವೀಕರಿಸಿ ಮುಂದಿನ ತನಿಖೆಯನ್ನು ಕೈಗೊಂಡಿರುತ್ತೇನೆ. ದಿಃ 02.12.2019 ರಂದು ಚಾಸಾ-7 ರವರ ಮುಖಾಂತರ ಈ ಪ್ರಕರಣದ ಮುದ್ದೆಮಾಲನ್ನು ರಾಸಾಯನಿಕ ಪರೀಕ್ಷೆ ಕುರಿತು ಎಫ್ ಎಸ್ ಎಲ್ ಧಾರವಾಡದವರಿಗೆ ಕಳುಹಿಸಲಾಯಿತು. ದಿಃ 19.12.2019 ರಂದು ಚಾಸಾ-7 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ದಿಃ 04.01.2020 ರಂದು ಎಫ್ ಎಸ್ ಎಲ್ ಧಾರವಾಡದವರ ವರದಿಯನ್ನು ಸ್ವೀಕರಿಸಿ ಕಡತಕ್ಕೆ

ಅಳವಡಿಸಿರುತ್ತೇನೆ. ದಿಃ 06.01.2020 ರಂದು ಆರೋಪಿತರ ವಿರುದ್ಧ ಸಾಕ್ಷ್ಯಾಧಾರಗಳು ಲಭ್ಯವಾಗಿರುವ ಕಾರಣ ಅಂತಿಮ ವರದಿಯನ್ನು ತಯಾರಿ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ಸಾಕ್ಷಿಯು ಎಫ್ ಎಸ್ ಎಲ್ ರವರಿಗೆ ಕಳುಹಿಸಿದ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ4 ಎಂದು, ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ4(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಸೂಚನಾ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ5 ಎಂದು, ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ5(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಮಾಲುಪಟ್ಟಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ6 ಎಂದು, ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ6(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಎಫ್ ಎಸ್ ಎಲ್ ರವರಿಂದ ಪಡೆದ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ7 ಎಂದು, ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ7(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಮಾದರಿ ಶೀಲು ನಮೂನೆ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ3 ಎಂದು, ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ3(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಮಾಲುಪಟ್ಟಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ8 ಎಂದು, ಅದರ ಮೇಲೆ ಇರುವ ಚಾಸಾ-8 ರವರ ಸಹಿಯನ್ನು ನಿಪಿ8(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ 125 ಟೆಟ್ರಾ ಪಾಕೇಟಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ಒಟ್ಟು ಮು.ಮಾ.1 ಎಂದು ಗುರುತಿಸಲಾಗಿದೆ.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ವ್ಯಕ್ತಿಯನ್ನು ನೋಡಿ ಗುರುತಿಸಿದ್ದು, ಸದರಿ ವ್ಯಕ್ತಿಯು ಹೆಸರು ಗುರುಸಿದ್ದಪ್ಪ ಎಂದು ಈ ಪ್ರಕರಣದ ಆರೋಪಿ ಎಂದು ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಅಪಾದಿತನ ಪರ ಶ್ರೀ ಕೆ ಬಿ ಜಿ ವಕೀಲರಿಂದ**

ತನಿಖಾ ಕಾಲದಲ್ಲಿ ನಾನು ಗುನ್ಹಾ ಸ್ಥಳಕ್ಕೆ ಹೋಗಿ ನೋಡಿಲ್ಲ. ಚಾಸಾ-1 ರವರ ದೂರಿನ ಆಧಾರದ ಮೇಲೆ ನಾನು ಈ ಪ್ರಕರಣದ ತನಿಖೆಯನ್ನು ಮಾಡಿದ್ದೇನೆ ಎಂದರೆ ಸರಿ. ದಿಃ 19.12.2019 ರಂದು ಸಾಕ್ಷಿಗಳ ಹೇಳಿಕೆಯನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಠಾಣೆಯ ಅಂಕೆ ಸಂಖ್ಯೆಯ ಸಲುವಾಗಿ ಈ ಪ್ರಕರಣವನ್ನು ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಠಾಣೆಯಲ್ಲಿ ಈ ಪ್ರಕರಣದ ದಾಖಲಾತಿಗಳನ್ನು ತಯಾರಿ ಅಂತಿಮ ವರದಿಯಲ್ಲಿ ಅಳವಡಿಸಿ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಈ ಪ್ರಕರಣದ ಆರೋಪಿಗೂ ಮತ್ತು ಮು. ಮಾ1 ರಲ್ಲಿರುವ ಮುದ್ದೆಮಾಲಿಗೂ ಯಾವುದೇ ಸಂಬಂಧವಿಲ್ಲ ಎಂದರೆ ಸರಿಯಲ್ಲ.

**ಮರು-ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

**ಓ ಹೇ ಕೆ ಸರಿ ಇದೆ,**

**ದಿವಾಣಿ ನ್ಯಾಯಾಧೀಶರು ಹಾಗೂ**

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ.**